# ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು.

**ಎಸ್.ಸಿ. ಸಂಖ್ಯೆ 8/2023**

| | | |
|---|---|---|
| ಸಾಕ್ಷಿದಾರರ ಹೆಸರು | : ಕರಿಯಪ್ಪ | ಪಿಡಬ್ಲ್ಯೂ ಃ 3 |
| ತಂದೆಯ ಹೆಸರು | : ದಾಸಯ್ಯ | ಸಿಡಬ್ಲ್ಯೂ ಃ 4 |
| ವಯಸ್ಸು | : 77 ವರ್ಷ | |
| ಉದ್ಯೋಗ | : ಕೂಲಿ ಕೆಲಸ | |
| ವಾಸಸ್ಥಳ | : ಮೇಟಗಳ್ಳಿ | |

**ಸಾಕ್ಷಿಯನ್ನು ಈ ದಿನ ದಿಃ04.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**

1. ನಾನು ಮೇಲೆ ಹೇಳಿದ ವಿಳಾಸದಲ್ಲಿ ಹಲವು ವರ್ಷಗಳಿಂದ ವಾಸವಿರುತ್ತೇನೆ.

2. ನಾನು ಸಹಿ ಮಾಡುತ್ತೇನೆ. ಸಾಕ್ಷಿಯೂ ತನ್ನ ಸಹಿ ಇರುವ ದಾಖಲೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಸ್ಥಳ ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ನಾನು ಸದರಿ ದಾಖಲೆಗೆ ಈಗ 5-6 ವರ್ಷ ಹಿಂದೆ ಸಹಿ ಮಾಡಿರುತ್ತೇನೆ. ನಾನು ಒಂದು ಬಾರಿ ನನ್ನ ಸ್ನೇಹಿತರ ಜೊತೆಗೆ ಬೆಳವತ್ತಾ ಗ್ರಾಮದಲ್ಲಿ ಒಂಟಿಕೊಪ್ಪಲಿನ ವಾಸಿಯಾದ ಪ್ರಭಾಕರ್ ರವರ ಮನೆಯನ್ನು ನೋಡಲು ಹೋದಾಗ, ಸದರಿ ಮನೆಯ ಬಳಿ ಪೊಲೀಸರು ಬಂದಿದ್ದರು, ಅವರು ನನ್ನನ್ನು ಕರೆದರು. ಅಲ್ಲಿ ನನಗೆ

ಪೊಲೀಸರು ಒಂದು ಸಹಿ ಹಾಕಲು ಹೇಳಿದರು. ನನಗೆ ಪೊಲೀಸರು ಪರಿಚಯಸ್ಥರಿದ್ದರಿಂದ ದಾಖಲೆಗೆ ನಾನು ಸಹಿ ಹಾಕಿರುತ್ತೇನೆ. ಪೊಲೀಸರು ಅಲ್ಲಿ ಏನು ಮಾಡಿದರು ಎಂದು ನನಗೆ ತಿಳಿದಿರುವುದಿಲ್ಲ. ಅಲ್ಲಿ ಯಾವುದೇ ವಾಹನಗಳು ಸಹ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಗೆ ಪೋಟೋಗಳನ್ನು ತೋರಿಸಿ, ತನ್ನನ್ನು ಗುರುತಿಸಲು ಕೇಳಿದಾಗ, ಸಾಕ್ಷಿಯು ನಿಪಿ.3 ರಲ್ಲಿಯ ಏಳು ಪೋಟೋಗಳಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪೋಟೋಗಳನ್ನು ಅಲ್ಲಿಯೇ ಪಕ್ಕದಲ್ಲಿ ನಿಲ್ಲಿಸಿ ತೆಗೆದಿರುತ್ತಾರೆ. ಯಾವ ಕಾರಣಕ್ಕೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ.

3. ಸಾಕ್ಷಿಯೂ ತನ್ನ ಸಹಿ ಇರುವ ದಾಖಲೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಕಚ್ಚಾ ನಕಾಶೆಯಾಗಿದ್ದು, ಅದನ್ನು ಈಗಾಗಲೇ ನಿಪಿ.4 ಎಂದು, ಸಾಕ್ಷಿಯ ಸಹಿಯನ್ನು ನಿಪಿ.4(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯೂ ತನ್ನ ಸಹಿ ಇರುವ ದಾಖಲೆಯು ನೊಟೀಸ್ ಆಗಿದ್ದು, ಅದನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ನಿಪಿ. 8 ಎಂದು, ಸಾಕ್ಷಿಯ ಸಹಿಯನ್ನು ನಿಪಿ.8(ಎ) ಎಂದು ಗುರುತಿಸಲಾಯಿತು. ಎರಡು-ಮೂರು ಸಹಿಗಳನ್ನು ಬೆಳವತ್ತಾದಲ್ಲಿ ಹಾಕಿಸಿಕೊಂಡಿದ್ದು, ಮತ್ತೊಮ್ಮೆ ಠಾಣೆಗೆ ಕರೆದು ಅಲ್ಲಿಯೂ ಕೂಡ ಸಹಿ ಪಡೆದುಕೊಂಡಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಕೋರಿದ್ದು, ಸದರಿಯವರ ಕೋರಿಕೆಯನ್ನು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಿದೆ.)

**ಪಾಟೀ ಸವಾಲು : ಮಾನ್ಯ ಸರ್ಕಾರಿ ಅಭಿಯೋಜಕರಿಂದ**

4. ದಿ.19.01.2020 ರಂದು ಪೊಲೀಸರು ಲಕ್ಷ್ಮೀ ಹೋಟೇಲ್ ಬಳಿ ಬಂದು, ಅಲ್ಲಿ ಚಾಸಾ.1 ರವರು ಸ್ಥಳವನ್ನು ತೋರಿಸಿದ್ದು, ಆ ಸಮಯದಲ್ಲಿ ಪೊಲೀಸರು ನನಗೆ ಪಂಚನಾಗುವಂತೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿಯಲ್ಲ. ಪೊಲೀಸರು ಸದರಿ ಸ್ಥಳವನ್ನು ಪರಿಶೀಲನೆ ಮಾಡಿ, ಸದರಿ ಸ್ಥಳದಲ್ಲಿ ರಕ್ತ ಬಿದ್ದಿದ್ದು, ಅದನ್ನು ಪೊಲೀಸರು ರಕ್ತ ಮಿಶ್ರಿತ ಮಣ್ಣು ಮತ್ತು ರಕ್ತ ರಹಿತ ಮಣ್ಣನ್ನು ಪ್ರತ್ಯೇಕವಾಗಿ ಪ್ಲಾಸ್ಟಿಕ್ ಡಬ್ಬದಲ್ಲಿ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ಆಟೋ ಜಖಂ ಆಗಿ, ಆಟೋದ ಗಾಜು, ಫೈಬರ್ ಗಳನ್ನು ಸಹ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿಯೂ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ ಮತ್ತು ಚಾಸಾ.1 ರವರು ತನ್ನ ಅಣ್ಣನ ಚಪ್ಪಲಿ ಎಂದು ಗುರುತಿಸಿದ್ದು, ಅವುಗಳನ್ನು ಸಹ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿಯೂ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಅಲ್ಲಿ ಅಮಾನತ್ತುಪಡಿಸಿಕೊಂಡ ವಸ್ತುಗಳನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ ಎಂದು ನುಡಿಯುತ್ತಾರೆ. ಸ್ಥಳದಲ್ಲಿ ಮಹಜರ್ ಜರುಗಿಸಿ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳದಲ್ಲಿ ಮಹಜರ್ ಕಾಲದಲ್ಲಿ ಪೊಟೋಗಳನ್ನು ಸಹ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

5. ಎಲ್ಲಾ ವಿಚಾರ ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದೇನೆ ಎಂದರೆ ಸರಿಯಲ್ಲ.

<u>**ಮರು ವಿಚಾರಣೆ ಃ ಇಲ್ಲ**</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಇ ಎ ಒ**

**3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು**
**ಮೈಸೂರು.**